CW :4
PW :6

# ಪ್ರಧಾನ ಹಿರಿಯ ವ್ಯವಹಾರಿಕ ನ್ಯಾಯಾಧೀಶರು ಮತ್ತು ಹೆಚ್ಚುವರಿ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಪುತ್ತೂರು, ದ.ಕ

## CC No.475/2023

| | | |
|---|---|---|
| ಸಾಕ್ಷಿದಾರರ ಹೆಸರು | : | ಗುರುವಾ |
| ತಂದೆಯ ಹೆಸರು | : | ತನಿಯ |
| ಪ್ರಾಯ | : | 60 |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಕೋಡಿಂಬಾಡಿ |
| ದಿನಾಂಕಃ 13.08.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು. | | |

**ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದಃ**

2 ವರ್ಷದ ಹಿಂದೆ ಕೃಷ್ಣಾನಗರ ಎಂಬಲ್ಲಿ ನಾನು ಕೆಲಸ ಮುಗಿಸಿ ರಿಕ್ಷಾದಲ್ಲಿ ಹೋಗುತ್ತಿದ್ದಾಗ ಸ್ಕೂಟರ್ ಮತ್ತು ರಿಕ್ಷಾ ಪಲ್ಟಿಯಾಗಿ ಬಿದ್ದಿದ್ದು, ಅದನ್ನು ನೋಡಿರುತ್ತೇನೆ. ನಂತರ ಗಾಯಾಳುಗಳನ್ನು ಮಹಾವೀರ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ಅಪಘಾತವು ಯಾರ ತಪ್ಪಿನಿಂದ ಮತ್ತು ಹೇಗೆ ಆಯಿತೆಂದು ನನಗೆ ಗೊತ್ತಿಲ್ಲ. ಅಪಘಾತವನ್ನು ನಾನು ನೋಡಿರುವುದಿಲ್ಲ. ರಿಕ್ಷಾದಲ್ಲಿದ್ದ 3 ಜನಕ್ಕೆ ಗಾಯಗಳಾಗಿದ್ದು, ಒಬ್ಬರು ಮೃತರಾಗಿರುತ್ತಾರೆ. ಘಟನೆಯ ಸಂಬಂಧ ನಾನು ಹೇಳಿಕೆ ಮತ್ತು ಮರುಹೇಳಿಕೆ ನೀಡಿರುವುದಿಲ್ಲ.

(**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿಸವಾಲಿಗೆ ಅನುಮತಿಯನ್ನು ಸರ್ಕಾರಿ ಸಹಾಯಕ ಅಭಿಯೋಜಕರವರು ಕೋರಿಕೊಂಡಿದ್ದು, ಅನುಮತಿ ನೀಡಿಲಾಯಿತು**)

**ಪಾಟಿಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿನಾಂಕಃ 14.05.2023 ರಂದು ಸಂಜೆಃ6.30 ಕ್ಕೆ ಪುತ್ತೂರು ತಾಲೂಕು ಚಿಕ್ಕಮುಡ್ನೂರು ಗ್ರಾಮದ ಕೃಷ್ಣಾನಗರದಲ್ಲಿ ಆಶೀರ್ವಾದ ಕಾಂಪ್ಲೆಕ್ಸ್ ನ ಎದುರು ನಿಂತಿದ್ದಾಗ ಆರೋಪಿಯು ತನ್ನ ಆಟೋ ರಿಕ್ಷಾದಲ್ಲಿ ಪ್ರಯಾಣಿಕರನ್ನು ಕುಳ್ಳಿರಿಸಿ ಪುತ್ತೂರು ಕಡೆಯಿಂದ ಕೃಷ್ಣಾನಗರ ಕಡೆಗೆ ಅಜಾಗರೂಕತೆ ಮತ್ತು ನಿರ್ಲಕ್ಷತನದಿಂದ

CW :4
PW :6

ಚಲಾಯಿಸಿ, ಚಾಸಾ1 ರವರ ಸವಾರರಾಗಿ ಪುತ್ತೂರಿನಿಂದ ಕೃಷ್ಣಾನಗರ ಕಡೆಗೆ ಚಲಾಯಿಸಿ ರಸ್ತೆಯ ಎಡಬದಿಯ ಕಚ್ಚಾರಸ್ತೆಗೆ ಹೋಗಲು ಸ್ಕೂಟರ್ ನ ಇಂಡಿಕೇಟರ್ ಹಾಕಿದಾಗ ಆರೋಪಿಯು ತನ್ನ ಆಟೋ ರಿಕ್ಷಾದಿಂದ ಸ್ಕೂಟರ್ ಗೆ ಹಿಂದಿನಿಂದ ಅಪಘಾತಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಪಘಾತವನ್ನು ನಾನು ಕಣ್ಣಾರೆ ಕಂಡಿರುತ್ತೇನೆ ಎಂದರೆ ಸರಿಯಲ್ಲ. ಈ ಸಂಬಂಧ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ6** ಎಂದು ಗುರುತಿಸಲಾಯಿತು. ರವರು ಮೃತರಾದ ವಿಷಯ ತಿಳಿದು, ಆ ಸಂಬಂಧ ನನ್ನ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಮರುಹೇಳಿಕೆಯನ್ನು **ನಿಪಿ7** ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ, ಅಪಘಾತವನ್ನು ಕಣ್ಣಾರೆ ಕಂಡಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿರುತ್ತೇನೆ ಎಂದರೆ ಸರಿಯಲ್ಲ.

**ಪಾಟಿಸವಾಲು ಆರೋಪಿ ಪರ ವಕೀಲರಿಂದಃ**ಇಲ್ಲ.

**ಮರುವಿಚಾರಣೆಃ ಇಲ್ಲ**

ನನ್ನ ಉಕ್ತಲೇಖನದ ರೀತ್ಯಿ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸ. ಇದೆ

ಪ್ರಧಾನ ಹಿರಿಯ ವ್ಯವಹಾರಿಕ ನ್ಯಾಯಾಧೀಶರು
ಪುತ್ತೂರು